## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ನೋಂದಣಿ ಕಛೇರಿಗಳ ಉಪಯೋಗಕ್ಕಾಗಿ ಯುಪಿಎಸ್ ಹಾಗೂ ಬ್ಯಾಟರಿಗಳನ್ನು ಖರೀದಿಸಲು ಪರಿಷ್ಕೃತ ದರಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಕಂಇ/4/ಎಂಎನ್ಎಂಯು/2021 ದಿನಾಂಕ: 01-03-2021.
2) ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಪತ್ರ ಸಂಖ್ಯೆ: ಕಾಂಪ್/100/2020-21 ದಿನಾಂಕ: 11-06-2021 ಮತ್ತು 17-08-2021.

* * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ, ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಗಣಕೀಕೃತ ನೋಂದಣಿಯನ್ನು ಅಳವಡಿಸಿಕೊಂಡಿದ್ದು, ನೋಂದಣಿಗಾಗಿ ನಿರಂತರ ವಿದ್ಯುತ್ ಪೂರೈಕೆ ಅವಶ್ಯವಿದ್ದು, ಈಗಾಗಲೇ ಬಳಕೆಯಾಗುತ್ತಿರುವ ಯುಪಿಎಸ್ ಹಾಗೂ ಬ್ಯಾಟರಿಗಳು 2014ರಲ್ಲಿ ಖರೀದಿಸಲಾಗಿದ್ದು, ಇವುಗಳು ತಮ್ಮ ಕಾರ್ಯಕ್ಷಮತೆ ಕಳೆದುಕೊಂಡಿರುತ್ತವೆ. ಈ ಸಂಬಂಧ, ದಿನಾಂಕ: 17-12-2020ರಂದು ಮಾನ್ಯ ಮುಖ್ಯ ಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ, ರಾಜ್ಯದ 282 ಜಿಲ್ಲಾ/ ಉಪ ನೋಂದಣಿ ಕಛೇರಿಗಳಿಗೆ ಅಗತ್ಯವಿರುವ ಯುಪಿಎಸ್ ಹಾಗೂ ಬ್ಯಾಟರಿಗಳನ್ನು Short Term Tender ಮೂಲಕ ಖರೀದಿಸಲು ತೀರ್ಮಾನಿಸಲಾಗಿದ್ದು, ಅದರಂತೆ, ಪ್ರಸ್ತುತ ಲೆಕ್ಕಶೀರ್ಷಿಕೆ 2030-03-001-2-04-051ರಲ್ಲಿ 2020-21ನೇ ಸಾಲಿನಲ್ಲಿ ಒದಗಿಸಿರುವ ಒಟ್ಟು ಅನುದಾನದ ರೂ.7800.00/- ಲಕ್ಷಗಳ ಪೈಕಿ ರೂ.8.8 ಕೋಟಿಗಳ ವೆಚ್ಚದಲ್ಲಿ Short Term Tender ಮೂಲಕ ಖರೀದಿಸಲು ಸಿದ್ಧಪಡಿಸಿ ಸಲ್ಲಿಸಿರುವ ಆರ್‌ಎಫ್‌ಪಿಗೆ ಅನುಮತಿ ನೀಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಪತ್ರದಲ್ಲಿ, ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ನೋಂದಣಿ ಕಛೇರಿಗಳಿಗೆ ಯುಪಿಎಸ್ ಮತ್ತು ಬ್ಯಾಟರಿಗಳನ್ನು ಖರೀದಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಿದ ನಂತರ ಇಲಾಖೆಯ ಅಂದಾಜು ಮೊತ್ತ ರೂ.8,80,08,000/-, ಜಿ.ಎಸ್.ಟಿ. ರೂ.1,58,41,440/-ಗಳೊಂದಿಗೆ ಒಟ್ಟು ಮೊತ್ತ ರೂ.10,38,49,440/-ಗಳಾಗಿರುತ್ತದೆ. ಆದರೆ L1 ಬಿಡ್‌ದಾರರು ಜಿ.ಎಸ್.ಟಿ. ಒಳಗೊಂಡಂತೆ ರೂ.12,66,58,006/-ಗಳ ಹೆಚ್ಚುವರಿ ದರವನ್ನು ನಮೂದಿಸಿರುತ್ತಾರೆಂದು ತಿಳಿಸಿ, ಅಂತಿಮವಾಗಿ ರೂ.12,65,00,000/-ಗಳ ದರಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ/4/ಎಂಎನ್ಎಂಯು/2021**
**ಬೆಂಗಳೂರು, ದಿನಾಂಕ: 24-08-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ನೋಂದಣಿ ಕಛೇರಿಗಳಿಗೆ ಯುಪಿಎಸ್ ಮತ್ತು ಬ್ಯಾಟರಿಗಳ ಖರೀದಿಗಾಗಿ L1 ಬಿಡ್‌ದಾರರು

....2

ನಮೂದಿಸಿರುವ ರೂ.12,65,00,000/-ಗಳ (ಹನ್ನೆರಡು ಕೋಟಿ ಅರವತ್ತೈದು ಲಕ್ಷಗಳು ಮಾತ್ರ) ಜಿ.ಎಸ್.ಟಿ. ಒಳಗೊಂಡಂತೆ, ಪರಿಷ್ಕೃತ ದರಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

(ಮಾನ್ಯ ಮುಖ್ಯಮತ್ರಿಯವರಿಂದ
ಅನುಮೋದಿಸಲ್ಪಟ್ಟಿದೆ)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ.ಸಿ.ಕುಮಾರ)**
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ
(ವಿ.ನಿ, ನೋಂದಣಿ ಮತ್ತು ಮುದ್ರಾಂಕ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ&ಇ), ಅಂಚೆ ಪಟ್ಟಿಗೆ ಸಂಖ್ಯೆ: 5329, ಪಾರ್ಕ್‌ಹೌಸ್ ರಸ್ತೆ, ಕರ್ನಾಟಕ, ಬೆಂಗಳೂರು-560 001.
2. ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು, ಕಂದಾಯ ಭವನ, 8ನೇ ಮಹಡಿ, ಕೆ.ಜಿ.ರಸ್ತೆ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 7/8), ವಿಧಾನ ಸೌಧ, ಬೆಂಗಳೂರು.
4. ಅಪರ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.

**ಪ್ರತಿಗಳು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ, ಭೂಮಿ, ಯುಪಿಒಆರ್) ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ., ನೋಂದಣಿ ಮತ್ತು ಮುದ್ರಾಂಕ) ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಶಾಖಾ ರಕ್ಷಾ ಕಡತ ಮತ್ತು ಹೆಚ್ಚುವರಿ ಪ್ರತಿಗಳು.